ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 240.

ಸದಸ್ಯರ ಹೆಸರು: ಶ್ರೀ ಎನ್. ರವಿಕುಮಾರ್.

(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ: 10.12.2020.

ಉತ್ತರಿಸುವ ಸಚಿವರು: ಮಾನ್ಯ ಮುಖ್ಯ ಮಂತ್ರಿಗಳು.

ಉಪ ಪ್ರಶ್ನೆ	ಉತ್ತರ
ಅ) ಐ.ಎಂ.ಎ ಹಗರಣದಲ್ಲಿ ಇದುವರೆಗೆ ಎಷ್ಟು ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಾಗಿದೆ;	ಐ.ಎ.ಎಸ್ – 01. ಐ.ಪಿ.ಎಸ್ – 02.
ಆ) ಕ್ರಿಮಿನಲ್ ಮೊಕದ್ದಮೆ ದಾಖಲಾದ ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕೈಗೊಳ್ಳುವ ಕ್ರಮಗಳೇನು; ಸದರಿ ಅಧಿಕಾರಿಗಳನ್ನು ಅಮಾನತ್ತುಗೊಳಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಯಾವ ನಿಯಮದ ಅನ್ವಯ ಸದರಿ ಅಧಿಕಾರಿಗಳಿಗೆ ಕರ್ತವ್ಯ ನಿರ್ವಹಿಸಲು ಅನುಮತಿ ನೀಡಲಾಗಿದೆ;	ಪ್ರಕರಣದ ವಿಚಾರಣೆಯನ್ನು ಸಿ.ಬಿ.ಐ ಸಂಸ್ಥೆಗೆ ವಹಿಸಿದ್ದು, ಈ ಪ್ರಕರಣದಲ್ಲಿ ಆರೋಪಿತರಾಗಿರುವ ಅಧಿಕಾರಿಗಳ ವಿರುದ್ಧ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ, 1988ರ ಕಲಂ 17A(1)(b)ರನ್ವಯ ತನಿಖೆ/ವಿಚಾರಣೆ ನಡೆಸಲು ಸಿ.ಬಿ.ಐ ಸಂಸ್ಥೆಗೆ ಅನುಮತಿ ನೀಡಲಾಗಿತ್ತು. ಈ ಪ್ರಕರಣದಲ್ಲಿ ಆರೋಪಿತ ಐ.ಎ.ಎಸ್ ಅಧಿಕಾರಿಯು ನಿಧನ ಹೊಂದಿರುತ್ತಾರೆ. ಐ.ಪಿ.ಎಸ್ ಅಧಿಕಾರಿಗಳನ್ನು ಅಭಿಯೋಜನೆಗೊಳಪಡಿಸಲು ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ, 1988ರ ಕಲಂ 19ರಡಿಯಲ್ಲಿ ಸಿ.ಬಿ.ಐ ಸಂಸ್ಥೆಗೆ ಅಭಿಯೋಜನಾ ಮಂಜೂರಾತಿ ನೀಡಲಾಗಿದೆ. ಐ.ಎ.ಎಸ್ ಅಧಿಕಾರಿಯನ್ನು ಅಮಾನತ್ತುಗೊಳಿಸಲಾಗಿದೆ. ಐ.ಪಿ.ಎಸ್ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ಪ್ರಾರಂಭಿಸಲು ಕ್ರಮವಹಿಸಲಾಗಿದೆ.
ಇ) ಕ್ರಿಮಿನಲ್ ಪ್ರಕರಣ ದಾಖಲಾದ ಸರಕಾರಿ ನೌಕರರನ್ನು ಅಮಾನತ್ತು ಮಾಡಿ ಇಲಾಖಾ ವಿಚಾರಣೆಗೆ ಆದೇಶ ನೀಡಲಾಗುವುದೇ; ಈ ಕುರಿತು ಇರುವ ನಿಯಮಗಳೇನು;	ಅಖಿಲ ಭಾರತ ಸೇವೆಗಳು (ಶಿಸ್ತು ಮತ್ತು ಮೇಲ್ಮನವಿ) ನಿಯಮಗಳು, 1969ರನ್ವಯ ಕ್ರಮವಹಿಸಲಾಗುತ್ತದೆ.
ಈ) ಕ್ರಿಮಿನಲ್ ಮೊಕದ್ದಮೆ ದಾಖಲಾದ ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳ ಮೇಲೆ ನ್ಯಾಯಾಲಯದಲ್ಲಿ ಪ್ರಕರಣ ನಡೆಯುತ್ತಿದ್ದರೂ ಯಾವ ನಿಯಮದ ಅನ್ವಯ ಮುಂಬಡ್ತಿ ನೀಡಲಾಗುತ್ತದೆ;	ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಮುಂಬಡ್ತಿ ಮಾರ್ಗಸೂಚಿಗಳಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಾದ ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳಿಗೆ ಮುಂಬಡ್ತಿ ನೀಡಲು ಅವಕಾಶವಿರುವುದಿಲ್ಲ.

ಸಂಖ್ಯೆ:ಇ-ಸಿಆಸುಇ 606 ಸೇಅಸೇ 2020

(ಬಿ.ಎಸ್. ಯಡಿಯೂರಪ್ಪ)
ಮುಖ್ಯ ಮಂತ್ರಿ